ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 15ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

2. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎಸ್. ಸುರೇಶ್ ಕುಮಾರ್ (ಮಾನ್ಯ ಸದಸ್ಯರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಗಳನ್ನು ಒಪ್ಪಿಸುವುದು:

1. ಸ್ಥಳೀಯ ಪ್ರದೇಶಾಭಿವೃದ್ಧಿಗಳಿಂದ ಅನುಮೋದನೆಗೊಂಡ ಬಡಾವಣೆಗಳಲ್ಲಿ ಕೆ.ಪಿ.ಟಿ.ಸಿ.ಎಲ್. ವತಿಯಿಂದ ಹೈ–ಟೆನ್ಷನ್ ಲೈನ್ ಅಳವಡಿಸುತ್ತಿರುವ ಬಗ್ಗೆ.
2. ಕರ್ನಾಟಕ ಗೃಹ ಮಂಡಳಿ ಬಂಡೇಮಠ ಬಡಾವಣೆಗೆ ಮೂಲಸೌಕರ್ಯ ಒದಗಿಸುವ ಬಗ್ಗೆ

3. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) 2022ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

   ಅ) 2022ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಶ್ರೀ ಎನ್. ನಾಗರಾಜ (ಎಂಟಿಬಿ) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಡಾ. ನಾರಾಯಣಗೌಡ (ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು) ಅವರು:–**

   ಅ) 2022ನೇ ಸಾಲಿನ ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಯು.ಟಿ. ಅಬ್ದುಲ್ ಖಾದರ್, ಕೆ.ಆರ್. ರಮೇಶಕುಮಾರ, ಕೃಷ್ಣ ಬೈರೇಗೌಡ, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ, ಹಾಗೂ ಇತರರು ಮತ್ತು ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೆಂಕಟರಾವ್ ನಾಡಗೌಡ, ಸಿ.ಎನ್. ಬಾಲಕೃಷ್ಣ, ಎಂ. ಅಶ್ವಿನ್ ಕುಮಾರ್, ಕೆ.ಎಸ್. ಲಿಂಗೇಶ್ ಹಾಗೂ ಇತರರು** – ರಾಜ್ಯದಲ್ಲಿ ಪ್ರವಾಹ ಮತ್ತು ಅತಿವೃಷ್ಟಿಯ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ (ಮೂರನೇ ದಿನ) ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಕೃಷ್ಣಬೈರೇಗೌಡ, ಎ.ಟಿ. ರಾಮಸ್ವಾಮಿ ಮತ್ತು ಈಶ್ವರ್ ಭೀಮಣ್ಣ ಖಂಡ್ರೆ ಇವರುಗಳು** – ಬೆಂಗಳೂರು ನಗರ ಜಿಲ್ಲೆಯ ಲಗ್ಗೆರೆ ಗ್ರಾಮದಲ್ಲಿ ನಗರ ಭೂ ಮಿತಿ (Urban Land Ceiling) ಕಾನೂನಿನ ಅಡಿ ಕಳೆದುಕೊಂಡ ಭೂಮಿಯ ವಿಸ್ತೀರ್ಣದ ಬಗ್ಗೆ ಸುಳ್ಳು ಮಾಹಿತಿಗಳನ್ನು ನೀಡಿ, ಭಾರಿ ಪ್ರಮಾಣದ ಲಾಭವನ್ನು ಮಾಡಿಕೊಂಡಿರುವವರ ಹಾಗೂ ಇದಕ್ಕೆ ಸಹಕರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎಂ.ವೈ. ಪಾಟೀಲ ಅವರು** – ಅಫಜಲಪುರ ಪಟ್ಟಣದಲ್ಲಿ ವಿದ್ಯಾರ್ಥಿಗಳ ಹೆಚ್ಚಿನ ವಿದ್ಯಾಭ್ಯಾಸದ ಅನುಕೂಲಕ್ಕಾಗಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

2) **ಶ್ರೀ ಎಂ. ಕೃಷ್ಣಪ್ಪ (ಬೆಂಗಳೂರು ದಕ್ಷಿಣ) ಅವರು** – ಜಿಗಣಿ–ಬೊಮ್ಮಸಂದ್ರ ಲಿಂಕ್ ರಸ್ತೆ ಹಾಗೂ ಜಿಗಣಿ ಕೈಗಾರಿಕಾ ಪ್ರದೇಶದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

3) **ಶ್ರೀ ಜಿ.ಟಿ. ದೇವೇಗೌಡ ಅವರು** – ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನ ಕೊತ್ತೇಗಾಲ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ನಾಗನಹಳ್ಳಿ ಗ್ರಾಮದಲ್ಲಿರುವ ಗ್ರಾಮ ಠಾಣಾ ನಿವೇಶನವನ್ನು ಹಾಲು ಉತ್ಪಾದಕರ ಸಂಘಕ್ಕೆ ಮಂಜೂರು ಮಾಡಲು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4) **ಶ್ರೀ ವೆಂಕಟರಾವ್ ನಾಡಗೌಡ ಅವರು** – ರಾಜ್ಯದಲ್ಲಿ ಆರ್.ಟಿ.ಐ. ಅರ್ಜಿದಾರರಿಂದ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ದಕ್ಷಿಣ ಮತಕ್ಷೇತ್ರದಲ್ಲಿ ಅತಿವೃಷ್ಟಿಯಿಂದ ಮನೆಗಳು ನೆಲಸಮವಾಗಿ, ಆಸ್ತಿ–ಪಾಸ್ತಿ ನಾಶವಾಗಿದ್ದು, ಸದರಿ ಫಲಾನುಭವಿಗಳ ಹೆಸರುಗಳನ್ನು ರಾಜೀವಗಾಂಧಿ ನಿಗಮದ ತಂತ್ರಾಂಶದಲ್ಲಿ ಅಳವಡಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಸಿ.ಎಂ. ನಿಂಬಣ್ಣವರ್ ಅವರು** – ಕಲಘಟಗಿ ತಾಲ್ಲೂಕಿನ ದುಮ್ಮವಾಡ ಗ್ರಾಮದಲ್ಲಿ ಹಬ್ಬಿರುವ ಬೂದನಗುಡ್ಡ ಪ್ರದೇಶದಲ್ಲಿ ಕಟ್ಟಡ ಕಲ್ಲು (ಜಲ್ಲಿ ಕಲ್ಲು) ತೆಗೆದು ಉಪಜೀವನ ನಡೆಸುತ್ತಿರುವ ಬಡ ಕುಟುಂಬಗಳ ಹಿತದೃಷ್ಟಿಯಿಂದ ಲೀಜ್ ಆಧಾರದ ಮೇಲೆ ಜಲ್ಲಿಕಲ್ಲು (ಕಟ್ಟಡದ ಕಲ್ಲು) ತೆಗೆಯಲು ಅನುಮತಿ ನೀಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ದಿನಕರ ಕೇಶವ ಶೆಟ್ಟಿ ಅವರು** – ಕುಮಟಾ ತಾಲ್ಲೂಕಿನ ಗುಜರ್‌ಗಲ್ಲಿ ಎಂಬಲ್ಲಿ ಶಿಥಿಲಗೊಂಡಿರುವ ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯ ಹೊಸ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** – ರಾಜ್ಯದಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ವೇತನ ಪರಿಷ್ಕರಣೆ ಹಾಗೂ ಅರೆಕಾಲಿಕ ಉಪನ್ಯಾಸಕರನ್ನು ನೇಮಕಾತಿ ಮಾಡುವ ನಿಯಮದ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋಮು ಗಲಭೆಯಿಂದ ಮೂರು ಕೊಲೆಗಳು ನಡೆದಿದ್ದು, ಇವುಗಳ ಪೈಕಿ ಒಬ್ಬರ ಕುಟುಂಬದವರಿಗೆ ಮಾತ್ರ ಪರಿಹಾರವನ್ನು ನೀಡಿದ್ದು, ಉಳಿದ ಇಬ್ಬರ ಕುಟುಂಬದವರಿಗೆ ಪರಿಹಾರ ನೀಡುವ ಬಗ್ಗೆ ಹಾಗೂ ಒಂದು ಪ್ರಕರಣವನ್ನು ಮಾತ್ರ ಎನ್.ಐ.ಎ.ಗೆ ವಹಿಸಿದ್ದು, ಉಳಿದೆರಡು ಪ್ರಕರಣಗಳ ತನಿಖೆಗಳು ಇರುವ ಹಂತದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

10) **ಶ್ರೀ ಎಸ್. ಕುಮಾರ ಬಂಗಾರಪ್ಪ ಅವರು** – ಸೊರಬ ಪೊಲೀಸ್ ಠಾಣೆಗೆ ಸೇರಿದ ಆಸ್ತಿಯನ್ನು ಖಾಸಗಿ ವ್ಯಕ್ತಿಗಳಿಗೆ ಅಕ್ರಮವಾಗಿ ಹಕ್ಕುಪತ್ರ ಒದಗಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11) **ಶ್ರೀ ಆರ್. ಮಂಜುನಾಥ ಅವರು** – ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಿಂಗಾಪುರ GLRಗೆ ಕುಡಿಯುವ ನೀರು ಪೈಪ್‌ಲೈನ್ ಅಳವಡಿಸುವ ಕಾಮಗಾರಿಗಾಗಿ ಅಗೆಯಲಾಗಿದ್ದ ರಸ್ತೆಯನ್ನು ಶೀಘ್ರವಾಗಿ ದುರಸ್ತಿಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

http://kla.kar.nic.in/assembly/lob/lob.htm